ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ನೈರ್ಮಲ್ಯ ಕಾಪಾಡುವ ಬಗ್ಗೆ

1597 (2238) : ಶ್ರೀ ಎಂ. ಎಸ್. ಆತ್ಮಾನಂದ (ಮಂಡ್ಯ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ರಾಜ್ಯದ ನಗರಸಭೆ ಮತ್ತು ಪುರಸಭೆಗಳಲ್ಲಿ ಪೌರಕಾರ್ಮಿಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ ಪೌರಕಾರ್ಮಿಕರ ಕೊರತೆಯಿಂದಾಗಿ ನಗರ ಮತ್ತು ಪಟ್ಟಣ ಪ್ರದೇಶಗಳ ನೈರ್ಮಲ್ಯ ಕಾಪಾಡಲು ಸಾಧ್ಯವಾಗದೆ ಇರುವುದು ಸಹ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ನಗರ ಮತ್ತು ಪಟ್ಟಣಗಳಲ್ಲಿ ನೈರ್ಮಲ್ಯ ಕಾಪಾಡಲು ಸರ್ಕಾರವು ಯಾವ ಕ್ರಮವನ್ನು ಕೈಗೊಳ್ಳಲು ಉದ್ದೇಶಿಸಿದೆ?

ಶ್ರೀ ಬಿ. ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು) :

(ಅ) ಬಹಳಷ್ಟು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕೊರತೆ ಇರುವುದು ಗಮನಕ್ಕೆ ಬಂದಿದೆ.

(ಆ) ಬಂದಿದೆ.

(ಇ) ರಾಜ್ಯದ ನಗರ ಮತ್ತು ಪಟ್ಟಣಗಳಲ್ಲಿ ಸ್ವಚ್ಛತೆಯನ್ನು ಕಾಪಾಡಲು ಹಾಗೂ ಕಸ ವಿಲೇವಾರಿಗೆ ಟೆಂಡರ್ ಕರೆದು ಖಾಸಗಿಯವರಿಗೆ ಗುತ್ತಿಗೆ ಆಧಾರದ ಮೇಲೆ ವಹಿಸಲು ನಗರ ಸ್ಥಳೀಯ ಸಂಸ್ಥೆಗಳಿಗೆ ಸರ್ಕಾರದ ಸುತ್ತೋಲೆ ಸಂಖ್ಯೆ. ವ. ನ. ಇ. 168 ಜಿ. ಇ. ಎಲ್. 93 ದಿನಾಂಕ 19.11.93 ರಲ್ಲಿ ನಿರ್ದೇಶನ ನೀಡಲಾಗಿದೆ.

ರಾಜ್ಯದ ನಗರ ಸಭೆ ಮತ್ತು ಪುರಸಭೆಗಳಿಗೆ ಸಂಪನ್ಮೂಲ ಕ್ರೋಢೀಕರಣ

1598 (2239) : Sri M.S. Atmananda (Mandya) : Will the Hon'ble Minister for Urban Development be pleased to state:

(A) Has it come to the notice of the Govt. that due to acute financial Scarcity most of the City Municipalities in the State are unable to provide basic Civic amenities in a Systematic way;

(B) If so, what action has been taken by the Govt to mobilise resources in order to make the Municipalities financially Sound;

Sri. B. B. Chimmanakatty (Minister for Urban Development) :

(A) Yes

(B) The following measures are being taken to improve the financial position of the City and Town Municipalities.

(1) Govt. has been releasing funds since 1997-98 as per the recomendations of the State Finance Commission. Right now, the major portion of these funds so devolved, is being utilised by the Municipalities towards payment of salaries to its personnel. Some of the Municipalities are able to take up a few development works out of this amount. The electricity bill of the Municipalities for their street lighting and water supply schemes as well as repayment of loans, tax from HUDCO and LIC for provision of water supply schemes are being repaid out of SFC grants.

(2) Secondly, the State Govt. with a view to raise financial resources to fund the badly needed development works, especially the roads in the Municipalities has entered into a Memorandum of Understanding with HUDCO for raising Rs. 100/- Crores exclusively for undertaking infrastructure development works like repairs to the roads, building small culverts or bridges and provision of street lighting in all the Municipalities of the State.

(3) Thirdly, the Municipalities are also being made to realise their responsibility of rising available resources by optimally collecting 100% of the property tax, water rate, advertisement tax, tolls and cesses ect., as well as to revise the taxes at fixed intervals. Govt. is introducing a legislation to reform the property tax by basing it on the capital value of the building and site instead of on the rental value and also self-declaration of such tax. The move is expected to double the revenue of Municipalities

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪಟ್ಟಣ ಪಂಚಾಯಿತಿಗಳ ವ್ಯಾಪ್ತಿಯ ರಸ್ತೆಗಳ ಅಭಿವೃದ್ಧಿ

1600 (1900) : ಶ್ರೀ ಅಂಜನಮೂರ್ತಿ (ನೆಲಮಂಗಲ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಅನೇಕ ಪಟ್ಟಣ ಪಂಚಾಯಿತಿ ವ್ಯಾಪ್ತಿಗೆ ಸೇರಿದ ಮುಖ್ಯ ರಸ್ತೆಗಳು ವಾಹನಗಳ ಸಂಚಾರಕ್ಕೆ ಯೋಗ್ಯವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸದರಿ ರಸ್ತೆಗಳ ಡಾಂಬರೀಕರಣಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?